**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ- 395/2018**

**ಚಾಸಾ - 03 / ಪ್ರಾಸಾ - 03**

| | |
|---|---|
| ಹೆಸರು | **ರಾಜೇಶ್** |
| ತಂದೆಯ ಹೆಸರು | **ಹಾಲಯ್ಯ** |
| ವಯಸ್ಸು | **31** |
| ಉದ್ಯೋಗ | **ಕೂಲಿ** |
| ವಿಳಾಸ | **ಮಲ್ಲೂರು** |

**ದಿನಾಂಕಃ 20-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ** - **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** -

ನನಗೆ ಆರೋಪಿಗಳು ಯಾರು ಎಂದು ಗೊತ್ತಿಲ್ಲ. ನನಗೆ ಪ್ರಾಸಾ-1 ಮತ್ತು 2 ರವರು ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಮತ್ತು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿಲ್ಲ. ಸುಮಾರು 5 ವರ್ಷಗಳ ಹಿಂದೆ ನಾನು ಮೋಟಗಾನಹಳ್ಳಿಯಲ್ಲಿ ಇದ್ದಾಗ ಪೋಲೀಸರು ಸಹಿಯನ್ನು ಹಾಕಲು ಹೇಳಿದಾಗ ನಾನು ನನ್ನ ಸಹಿಯನ್ನು ಪಂಚನಾಮೆಗೆ ಗಲಾಟೆಯ ವಿಷಯಕ್ಕೆ ಸಂಬಂಧಿಸಿದಂತೆ ಹಾಕಿರುತ್ತೇನೆ. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನನ್ನ ಜೊತೆ ನಿಪಿ-2 ಕ್ಕೆ ಯಾರು ಸಹ ಸಹಿಯನ್ನು ಮಾಡಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಸ್ತುವನ್ನು ಅಮಾನತ್ತು ಮಾಡಿರುವುದಿಲ್ಲ. ನನಗೆ ನಿಪಿ-2 ರಲ್ಲಿ ಇರುವ ವಿಷಯದ ಬಗ್ಗೆ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು-- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ " ನಾನು ಮೇಲ್ಕಂಡ ವಿಳಾಸದಲ್ಲಿ –-------------- ಪಂಚನಾಮೆಗೆ ಸಹಿ ಹಾಕಿರುತ್ತೇನೆ ” ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ದಿ.14-12-2017 ರಂದು ಬೆಳಗ್ಗೆ 8 ರಿಂದ 8.30 ರ ಸಮಯದಲ್ಲಿ ಕೃತ್ಯ ನಡೆದ ಸ್ಥಳದಲ್ಲಿ ಪೋಲೀಸರು ನಿಪಿ-2 ರಂತೆ ಪಂಚನಾಮೆಯನ್ನು ಮಾಡಿ, ನಿಮ್ಮ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಮ್ಮ ಜೊತೆ ನಿಪಿ-2 ಕ್ಕೆ ಚಾಸಾ-5 ಮತ್ತು 6 ರವರು ಸಹಿಯನ್ನು ಮಾಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆ ಮಾಡುವ ಸಮಯದಲ್ಲಿ ಪೋಲೀಸರು ಮುದ್ದೆ ಮಾಲು-1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-2 ರಲ್ಲಿ ಇರುವ ವಿಷಯವನ್ನು ಪೋಲೀಸರು ಓದಿ ತಿಳಿಸಿದ ನಂತರ ನೀವು ಅರ್ಥ ಮಾಡಿಕೊಂಡು ಸಹಿಯನ್ನು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು-- ಆರೋಪಿಗಳ ಪರ ಶ್ರೀ. ಎಸ್ .ಜಿ.ಆರ್, ವಕೀಲರಿಂದ**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ- 395/2018**
**ಚಾಸಾ - 04 / ಫ್ರಾಸಾ - 04**

| | |
|---|---|
| ಹೆಸರು | **ನರಸಿಂಹಮೂರ್ತಿ** |
| ತಂದೆಯ ಹೆಸರು | **ರಾಮಸ್ವಾಮಿ** |
| ವಯಸ್ಸು | **49** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಮಲ್ಲೂರು** |

**ದಿನಾಂಕಃ 20-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ** - **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** -

ನನಗೆ ಆರೋಪಿಗಳು ಯಾರು ಎಂದು ಗೊತ್ತಿಲ್ಲ. ನನಗೆ ಫ್ರಾಸಾ-1 ಮತ್ತು 2 ರವರು ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಮತ್ತು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು-- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ " ನಾನು ಮೇಲ್ಕಂಡ ವಿಳಾಸದಲ್ಲಿ –--------------- ನೋಡಿದರೆ ಗುರುತಿಸುತ್ತೇನೆ" ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ

ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು-ಆರೋಪಿಗಳ ಪರ ಶ್ರೀ. ಎಸ್ .ಜಿ.ಆರ್, ವಕೀಲರಿಂದ**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**

**ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ- 395/2018**

**ಚಾಸಾ - 06 / ಪ್ರಾಸಾ - 05**

| | |
|---|---|
| ಹೆಸರು | **ರಕ್ಷಿತ್** |
| ತಂದೆಯ ಹೆಸರು | **ಮಹದೇವಯ್ಯ** |
| ವಯಸ್ಸು | **36** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಬ್ಯಾಡರಹಳ್ಳಿ** |

**ದಿನಾಂಕಃ 20-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ** - **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** -

ಈಗ ಸಾಕ್ಷಿಗೆ ನಿಪಿ-2 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ಕ್ಕೆ ನಾನು ಪೋ. ಠಾಣೆಯಲ್ಲಿ ಸಹಿಯನ್ನು ಮಾಡಿರುತ್ತೇನೆ. ನಿಪಿ-2 ರಲ್ಲಿ ಇರುವ ವಿಷಯದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು-- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿ.14-12-2017 ರಂದು ಬೆಳಗ್ಗೆ 8 ರಿಂದ 8.30 ರ ಸಮಯದಲ್ಲಿ ಕೃತ್ಯ ನಡೆದ ಸ್ಥಳದಲ್ಲಿ ಪೋಲೀಸರು ನಿಪಿ-2 ರಂತೆ ಪಂಚನಾಮೆಯನ್ನು ಮಾಡಿ, ನಿಮ್ಮ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಮ್ಮ ಜೊತೆ ನಿಪಿ-2 ಕ್ಕೆ ಪ್ರಾಸಾ-3 ಮತ್ತು ಚಾಸಾ-5 ರವರು ಸಹಿಯನ್ನು ಮಾಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಂಚನಾಮೆ ಮಾಡುವ ಸಮಯದಲ್ಲಿ ಪೋಲೀಸರು ಮುದ್ದೆ ಮಾಲು-1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-2 ರಲ್ಲಿ ಇರುವ ವಿಷಯವನ್ನು ಪೋಲೀಸರು ಓದಿ ತಿಳಿಸಿದ ನಂತರ ನೀವು ಅರ್ಥ ಮಾಡಿಕೊಂಡು ಸಹಿಯನ್ನು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು-- ಆರೋಪಿಗಳ ಪರ ಶ್ರೀ. ಎಸ್ .ಜಿ.ಆರ್, ವಕೀಲರಿಂದ**

ಫ್ರಾಸಾ-1 ರವರು ನಿಮ್ಮ ಚಿಕ್ಕಪ್ಪ ಮತ್ತು ಫ್ರಾಸಾ-2 ರವರು ನಿಮ್ಮ ಚಿಕ್ಕಪ್ಪನ ಮಗ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

**ಮರುವಿಚಾರಣೆ ಇಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**

**ಮಾಗಡಿ.**